**Akashvani : Bangalore**
**National Bulletin In Kannada**
**23.12.2024 / 13.10 hrs**

**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**23.12.2024 / 13.10 hrs**

<><*<><>*><>

<u>ಮುಖ್ಯಾಂಶಗಳು</u>

೧. ದೇಶಾದ್ಯಂತ ಉದ್ಯೋಗ ಮೇಳ ಆಯೋಜನೆ ; ಯುವಶಕ್ತಿಯ ಸಾಮರ್ಥ್ಯ ಬಳಸಿಕೊಳ್ಳಲು ಸರ್ಕಾರ ಬದ್ಧ - ಪ್ರಧಾನಿ ನರೇಂದ್ರ ಮೋದಿ

೨. ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಜನ್ಮ ದಿನಾಚರಣೆ ; ರಾಷ್ಟ್ರಪತಿ, ಪ್ರಧಾನಿ ಅವರಿಂದ ಗೌರವ ನಮನ

೩. ನಾಳೆ ರಾಷ್ಟ್ರೀಯ ಗ್ರಾಹಕರ ದಿನ ಆಚರಣೆ ; ಗ್ರಾಹಕ ವ್ಯವಹಾರಗಳ ಇಲಾಖೆಯಿಂದ 'ಜಾಗೊ ಗ್ರಾಹಕ್ ಜಾಗೊ ಆಪ್' ಬಿಡುಗಡೆ

೪. ೨೦೨೫ರ ಚಾಂಪಿಯನ್ ಟ್ರೋಫಿ ; ಭಾರತ-ಪಾಕಿಸ್ತಾನ ನಡುವಿನ ಪಂದ್ಯಗಳಿಗೆ ಯುಎಇ ಅತಿಥ್ಯ

<><*<><>*><>

ದೇಶದ ೪೫ ಸ್ಥಳಗಳಲ್ಲಿಂದು ೧೪ನೇ ಪ್ರಧಾನಮಂತ್ರಿ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ ೭೧ ಸಾವಿರಕ್ಕೂ ಅಧಿಕ ನೇಮಕಾತಿ ಪತ್ರಗಳನ್ನು ಹೊಸದಾಗಿ ನೇಮಕಗೊಂಡಿರುವ ಅಭ್ಯರ್ಥಿಗಳಿಗೆ ವರ್ಚುವಲ್ ಮೂಲಕ ವಿತರಿಸಿದರು. ಈ ವೇಳೆ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಇಂದು ಹಲವಾರು ವಲಯಗಳು ಪರಿವರ್ತನೆಗೆ ಸಾಕ್ಷಿಯಾಗಿವೆ. ದೇಶದ ಶಕ್ತಿಯಾಗಿರುವ ಯುವಜನತೆಯ ಸಾಮರ್ಥ್ಯವನ್ನು ಸಂಪೂರ್ಣವಾಗಿ ಉಪಯೋಗಿಸಿಕೊಳ್ಳುವುದಕ್ಕೆ ಕೇಂದ್ರ ಸರ್ಕಾರ ಪ್ರಾಥಮಿಕತೆ ನೀಡಿದೆ. ಇಂತಹ ಉದ್ಯೋಗ ಮೇಳದ ಮೂಲಕ ಈ ದಿಸೆಯಲ್ಲಿ ಮುನ್ನಡೆಯುತ್ತಿದ್ದೇವೆ. ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರದ ವಿವಿಧ ಸಚಿವಾಲಯಗಳು, ವಿಭಾಗಗಳು, ಹಾಗೂ ಇಲಾಖೆಗಳಲ್ಲಿ ಸರ್ಕಾರಿ ನೌಕರಿಗೆ ನೇಮಕ ಮಾಡಿಕೊಳ್ಳುವ ಅಭಿಯಾನ ನಡೆಯುತ್ತಿದೆ ಎಂದು ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ

ಬಳಿಕ ಮಾತನಾಡಿದ ಸಿಬ್ಬಂದಿ ಮತ್ತು ತರಬೇತಿ ಇಲಾಖೆಯ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್, ೭೧ ಸಾವಿರ ನೇಮಕಾತಿಗಳಲ್ಲಿ ಸುಮಾರು ೫೦ ಸಾವಿರ ನೇಮಕಾತಿಗಳನ್ನು ಅರೆಸೇನಾ ಪಡೆಗಳಲ್ಲಿ ಮಾಡಲಾಗುತ್ತದೆ. ಒಟ್ಟು ನೇಮಕಾತಿಯಲ್ಲಿ ಸುಮಾರು ೨೧ ಸಾವಿರ ನೇಮಕಾತಿ ಪತ್ರವನ್ನು ಇತರ ಹಿಂದುಳಿದ ವರ್ಗದ ಸಮುದಾಯದವರಿಗೆ ವಿತರಿಸಲಾಗಿದೆ ಎಂದು ಅವರು ಹೇಳಿದರು.

ಧ್ವನಿ : ಕೇಂದ್ರ ಸಚಿವ ಜಿತೇಂದ್ರ ಸಿಂಗ್

ಈ ಮೇಳ ಉದ್ಯೋಗ ಸೃಷ್ಟಿಗೆ ಹೆಚ್ಚಿನ ಆದ್ಯತೆ ನೀಡುವ ಪ್ರಧಾನಮಂತ್ರಿಯವರ ಬದ್ಧತೆಯನ್ನು ಈಡೇರಿಸುವ ನಿಟ್ಟಿನಲ್ಲಿ ಒಂದು ಪ್ರಮುಖ ಹೆಜ್ಜೆಯಾಗಿದೆ. ರಾಷ್ಟ್ರಮಟ್ಟದಲ್ಲಿ ಆಯೋಜಿಸಲಾಗುವ ಈ ಪ್ರಧಾನಮಂತ್ರಿ ಉದ್ಯೋಗ ಮೇಳಕ್ಕೆ ೨೦೨೨ರ ಅಕ್ಟೋಬರ್‌ನಲ್ಲಿ ಚಾಲನೆ ದೊರೆತಿದ್ದು, ಇಲ್ಲಿಯವರೆಗೆ ಸುಮಾರು ೫೦ ನಗರಗಳಲ್ಲಿ ಒಟ್ಟು ೧೩ ಮೇಳಗಳನ್ನು ಆಯೋಜಿಸಲಾಗಿದೆ. ಇದು ರಾಷ್ಟ್ರ ನಿರ್ಮಾಣ ಮತ್ತು ಸ್ವಯಂ-ಸಬಲೀಕರಣದಲ್ಲಿ ಭಾಗವಹಿಸಲು ಯುವಜನರಿಗೆ ಅವಕಾಶಗಳನ್ನು ಒದಗಿಸುತ್ತದೆ. ದೇಶಾದ್ಯಂತ ನೇಮಕಗೊಂಡ ಹೊಸ ಅಭ್ಯರ್ಥಿಗಳು ಗೃಹ ಸಚಿವಾಲಯ, ಅಂಚೆ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಹಣಕಾಸು ಸೇವೆಗಳ ಇಲಾಖೆ ಸೇರಿದಂತೆ ವಿವಿಧ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿ ಕಾರ್ಯನಿರ್ವಹಿಸಲಿದ್ದಾರೆ. ಪಿಎಂ ಉದ್ಯೋಗ ಮೇಳದ ಭಾಗವಾಗಿ ಬೆಂಗಳೂರಿನ ಯಲಹಂಕದಲ್ಲಿರುವ ಗಡಿ ಭದ್ರತಾ ಪಡೆ ತರಬೇತಿ ಕೇಂದ್ರದ ಆವರಣದಲ್ಲಿ ಆಯೊಜಿಸಲಾಗಿರುವ ಕಾರ್ಯಕ್ರಮದಲ್ಲಿ ಕೇಂದ್ರ ಕಾರ್ಮಿಕ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಭಾಗವಹಿಸಿದರು.

<><*<><>*><>

ಮಾಜಿ ಪ್ರಧಾನಮಂತ್ರಿ ಚೌಧರಿ ಚರಣಸಿಂಗ್ ಅವರ ಜನ್ಮದಿನವಾದ ಇಂದು, ದೇಶಾದ್ಯಂತ ರಾಷ್ಟ್ರೀಯ ರೈತರ ದಿನವನ್ನು ಆಚರಿಸಲಾಗುತ್ತಿದೆ. ಈ ದಿನದಂದು ರಾಷ್ಟ್ರದ ಬೆಳವಣಿಗೆಗೆ ಮತ್ತು ಅಭಿವೃದ್ಧಿಗೆ ರೈತರ ಕೊಡುಗೆಗಳನ್ನು ಗುರುತಿಸಿ ಗೌರವಿಸಲಾಗುತ್ತದೆ. ಆಹಾರ ಭದ್ರತೆಯನ್ನು ಖಾತರಿಪಡಿಸುವುದು, ಗ್ರಾಮೀಣ ಆರ್ಥಿಕತೆ ಉಳಿಸಿಕೊಳ್ಳುವುದು ಮತ್ತು ದೇಶದ ಕೃಷಿ ಪರಂಪರೆಯನ್ನು ಸಂರಕ್ಷಿಸುವಲ್ಲಿ ರೈತರು ನಿರ್ಣಾಯಕ ಪಾತ್ರವನ್ನು ನೆನಪಿಸುವ ದಿನವಾಗಿದೆ. ಸಮಾಜದಲ್ಲಿ ರೈತರ ಪ್ರಮುಖ ಪಾತ್ರವನ್ನು ಗುರುತಿಸಿ, ಸರ್ಕಾರ ರೈತರ ಸಾಮಾಜಿಕ-ಆರ್ಥಿಕ ಉನ್ನತಿಯನ್ನು ಬೆಂಬಲಿಸಲು ಹಾಗೂ ಸುಸ್ಥಿರ ಕೃಷಿ ಬೆಳವಣಿಗೆಯನ್ನು ಖಚಿತಪಡಿಸಲು ಅನೇಕ ಉಪಕ್ರಮಗಳನ್ನು ತೆಗೆದುಕೊಂಡಿದೆ. ಈ ಕಾರ್ಯಕ್ರಮಗಳಲ್ಲಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ, ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಕಿಸಾನ್ ಮನ್ಧನ್

ಯೋಜನೆ ಗಳೂ ಸೇರಿವೆ. ನವದೆಹಲಿಯ ಕಿಸಾನ್‌ಘಾಟ್‌ನಲ್ಲಿ ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರಿಗೆ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಗೌರವ ನಮನ ಸಲ್ಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣಾಭಿವೃದ್ಧಿ ಮತ್ತು ರೈತರ ಕಲ್ಯಾಣದೊಂದಿಗೆ ದೇಶದ ಅಭಿವೃದ್ಧಿಗೆ ಅಪಾರ ಕೊಡುಗೆ ನೀಡಿದ ಚರಣ ಸಿಂಗ್ ಅವರ ಗೌರವಾರ್ಥ ೨೦೦೧ ರಿಂದ ಕಿಸಾನ್ ದಿವಸ್ ಆಚರಿಸಿಕೊಂಡು ಬರಲಾಗುತ್ತಿದೆ. ಮುಂದಿನ ವರ್ಷ ಈ ಆಚರಣೆಗೆ ೨೫ ವರ್ಷ ಪೂರೈಸಲಿದ್ದು, ವರ್ಷಪೂರ್ತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದಿದ್ದಾರೆ.

ಧ್ವನಿ : ಜಗದೀಪ್ ಧನ್‌ಕರ್

ಪ್ರಧಾನಿ ನರೇಂದ್ರ ಮೋದಿ ಇಂದು ಮಾಜಿ ಪ್ರಧಾನಿ ಚೌಧರಿ ಚರಣ್ ಸಿಂಗ್ ಅವರ ಜನ್ಮ ಸ್ಮರಣೆ ಹಿನ್ನೆಲೆ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಅವರು, ಚೌಧರಿ ಚರಣ್ ಸಿಂಗ್ ಅವರು, ಬಡ ಮತ್ತು ರೈತರ ಹಿತೈಷಿಯಾಗಿದ್ದರು. ಅವರ ಬದ್ಧತೆ ಮತ್ತು ಸೇವ ಮನೋಭಾವ ಎಲ್ಲರಿಗೂ ಸದಾ ಸ್ಫೂರ್ತಿದಾಯಕವಾಗಿರುತ್ತದೆ.

<><*<><>*><>

ರಾಷ್ಟ್ರೀಯ ಗ್ರಾಹಕರ ದಿನ ೨೦೨೪ ರ ಅಂಗವಾಗಿ ನಾಳೆ ಗ್ರಾಹಕ ವ್ಯವಹಾರಗಳ ಇಲಾಖೆ 'ಜಾಗೋ ಗ್ರಾಹಕ್ ಜಾಗೋ' ಆಪ್, ಜಾಗೃತಿ ಆಪ್ ಮತ್ತು ಜಾಗೃತಿ ಡ್ಯಾಶ್‌ಬೋರ್ಡ್ ಅನ್ನು ಬಿಡುಗಡೆಗೊಳಿಸಲಿದೆ. ಈ ಅಪ್ಲಿಕೇಶನ್‌ಗಳು ಕೇಂದ್ರ ಗ್ರಾಹಕ ಸಂರಕ್ಷಣಾ ಪ್ರಾಧಿಕಾರಕ್ಕೆ ಸ್ವಯಂ ದೂರು ದಾಖಲಿಸುವ ಸಾಮರ್ಥ್ಯವನ್ನು ಹೆಚ್ಚಿಸುವ ಗುರಿಯನ್ನು ಹೊಂದಿವೆ. **Jago Grahak Jago** ಅಪ್ಲಿಕೇಶನ್ ಗ್ರಾಹಕರ ಆನ್‌ಲೈನ್ ಚಟುವಟಿಕೆಗಳ ಸಮಯದಲ್ಲಿ ಎಲ್ಲಾ ಯೂನಿವರ್ಸಲ್ ರಿಸೋರ್ಸ್ ಲಿಂಕ್-ಯುಆರ್‌ಎಲ್ ಗಳ ಕುರಿತು ಅಗತ್ಯ ಇ-ಕಾಮರ್ಸ್ ಮಾಹಿತಿಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ಯಾವುದೇ ಯುಆರ್‌ಎಲ್ ಅಸುರಕ್ಷಿತವಾಗಿದ್ದರೆ ಮತ್ತು ಎಚ್ಚರಿಕೆಯ ಅಗತ್ಯವಿದ್ದಲ್ಲಿ ಅವರಿಗೆ ಎಚ್ಚರಿಕೆ ನೀಡುತ್ತದೆ. ಜಾಗೃತಿ ಅಪ್ಲಿಕೇಶನ್ ಬಳಕೆದಾರರಿಗೆ ಯುಆರ್‌ಎಲ್‌ಗಳನ್ನು ವರದಿ ಮಾಡಲು ಅನುಮತಿಸುತ್ತದೆ.

<><*<><>*><>

ನವದೆಹಲಿಯಲ್ಲಿಂದು ಕೇಂದ್ರ ಸಚಿವಾಲಯಗಳು ಮತ್ತು ಇಲಾಖೆಗಳಲ್ಲಿನ ಅಂಕಿ ಅಂಶಗಳ ಸಲಹೆಗಾರರ ೨ನೇ ಸುತ್ತಿನ ಪರಿಶೀಲನಾ ಸಭೆ ನಡೆಯಿತು. ಸಭೆಯನ್ನು ಉದ್ಘಾಟಿಸಿ ಮಾತನಾಡಿದ ನೀತಿ ಆಯೋಗದ ಕಾರ್ಯ ನಿರ್ವಾಹಕ ಅಧಿಕಾರಿ ಬಿ.ವಿ.ಆರ್. ಸುಬ್ರಮಣ್ಯಂ ದತ್ತಾಂಶ ಆಧಾರಿತ ಆಡಳಿತಾತ್ಮಕ ನಿರ್ಧಾರಗಳೆಡೆಗೆ ಭಾರತ ಮುನ್ನಡೆಯಬೇಕು. ದತ್ತಾಂಶ ಸರ್ಕಾರದ ಪ್ರತಿ ನಿರ್ಧಾರದಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

<><*<><>*><>

ಸಂಸತ್ ಭವನದ ಸಂಕಿರಣದಲ್ಲಿ ನೂಕುನುಗ್ಗಲಿಗೆ ಗಾಯಗೊಂಡು ಆಸ್ಪತ್ರೆಗೆ ದಾಖಲಾಗಿದ್ದ ಬಿಜೆಪಿ ಸಂಸದರಾದ ಪ್ರತಾಪ್ ಸಾರಂಗಿ ಮತ್ತು ಮುಖೇಶ್ ರಾಜ್‌ಪುತ್ ಅವರನ್ನು ಇಂದು ಆಸ್ಪತ್ರೆಯಿಂದ ಬಿಡುಗಡೆಗೊಳಿಸಲಾಗಿದೆ. ಕಳೆದ ವಾರ ತಲೆಗೆ ಗಾಯಗಳಾಗಿ ಇಬ್ಬರು ಸಂಸದರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು.

<><*<><>*><>

ಉತ್ತರ ಭಾರತದಲ್ಲಿ ತೀವ್ರ ಶೀತ-ಗಾಳಿ ಪರಿಸ್ಥಿತಿ ತಲೆದೋರಿದ್ದು, ಜಮ್ಮು-ಕಾಶ್ಮೀರ, ಹಿಮಾಚಲಪ್ರದೇಶ, ಪಂಜಾಬ್ ಮತ್ತು ಮಧ್ಯಪ್ರದೇಶದಲ್ಲಿ ತೀವ್ರ ಚಳಿ ವಾತಾವರಣದ ಜೊತೆಗೆ ಭಾರೀ ಮಳೆಯಾಗುತ್ತಿದೆ. ಈ ಹಿನ್ನೆಲೆ ಈ ರಾಜ್ಯಗಳ ಹಲವು ಜಿಲ್ಲೆಗಳಿಗೆ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಜಮ್ಮು-ಕಾಶ್ಮೀರ ಮತ್ತು ಹಿಮಾಚಲ ಪ್ರದೇಶ ಹಿಮ ಹಾಗೂ ಮಂಜಿನಿಂದ ಮುಸುಕಿ ಹೋಗಿದ್ದು, ಜಲಪಾತಗಳು ಹಾಗೂ ನದಿಗಳು ಹಿಮಾವೃತಗೊಂಡಿದೆ.

<><*<><>*><>

ಚುನಾಯಿತ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತೀಯ ಮೂಲದ ಅಮೆರಿಕ ಉದ್ಯಮಿ ಶ್ರೀರಾಮ್ ಕೃಷ್ಣನ್ ಅವರನ್ನು ಶ್ವೇತಭವನದ ಕೃತಕ ಬುದ್ಧಿಮತ್ತೆ ವಿಭಾಗದ ನೀತಿ ಸಲಹೆಗಾರನಾಗಿ ನೇಮಕ ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಕೃಷ್ಣನ್, ಕೃತಜ್ಞತೆ ವ್ಯಕ್ತಪಡಿಸಿದ್ದಾರೆ. ಕೃಷ್ಣನ್ ಅವರ ತಂತ್ರಜ್ಞಾನ ಕ್ಷೇತ್ರಕ್ಕೆ ನೀಡಿದ ಕೊಡುಗೆ ಹಾಗೂ ನಾಯಕತ್ವದ ಗುಣಗಳನ್ನು ಗುರುತಿಸಿ ಅವರನ್ನು ನೇಮಕ ಮಾಡಿರುವ ನಿರ್ಧಾರವನ್ನು ಭಾರತೀಯ ಸಮುದಾಯ ಶ್ಲಾಘಿಸಿದೆ.  ಚೆನ್ನೈನಲ್ಲಿ ಜನಿಸಿದ ಶ್ರೀರಾಮ್ ಕೃಷ್ಣನ್ ಪದವಿ ಬಳಿಕ ಅಮೆರಿಕಗೆ ತೆರಳಿದರು.

<><*<><>*><>

ಭದ್ರತಾ ಕಾರಣಗಳಿಗಾಗಿ ಭಾರತ ಪಾಕಿಸ್ತಾನಕ್ಕೆ ಪ್ರಯಾಣಿಸಲು ನಿರಾಕರಿಸಿದ ನಂತರ, ೨೦೨೫ ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತದ ಪಂದ್ಯಗಳಿಗೆ ಯುನೈಟೆಡ್ ಅರಬ್ ಎಮಿರೇಟ್ಸ್ - ಯುಎಇ ಅನ್ನು ತಟಸ್ಥ ಸ್ಥಳವನ್ನಾಗಿ ಪಾಕಿಸ್ತಾನ ಕ್ರಿಕೆಟ್ ಮಂಡಳಿ ನಿರ್ಧರಿಸಿದೆ. ಸಂಭಾವ್ಯ ಸೆಮಿಫೈನಲ್ ಮತ್ತು ಫೈನಲ್ ಸೇರಿದಂತೆ ಭಾರತದ ಎಲ್ಲಾ ಪಂದ್ಯಗಳನ್ನು ಹೈಬ್ರಿಡ್ ಮಾದರಿಯಲ್ಲಿ ತಟಸ್ಥ ಸ್ಥಳದಲ್ಲಿ ಆಡಲಾಗುವುದು ಎಂದು ಅಂತಾರಾಷ್ಟ್ರೀಯ ಕ್ರಿಕೆಟ್ ಸಮಿತಿ -ಐಸಿಸಿ ಡಿಸೆಂಬರ್ ೧೯ ರಂದು ದೃಢಪಡಿಸಿತ್ತು. ಪಿಸಿಬಿ ಯುಎಇಯಲ್ಲಿ ನಿಖರವಾದ ಸ್ಥಳವನ್ನು ಇನ್ನು ಸ್ಪಷ್ಟಪಡಿಸದಿದ್ದರೂ ದುಬೈನಲ್ಲಿ ಪಂದ್ಯಗಳನ್ನು ಆಯೋಜಿಸುವ ನಿರೀಕ್ಷೆಯಿದೆ. ಭಾರತವು ಪಂದ್ಯಾವಳಿಯಲ್ಲಿ ಮೂರು ಗುಂಪು-ಹಂತದ ಪಂದ್ಯಗಳನ್ನು ಆಡಲಿದ್ದು, ಇದರಲ್ಲಿ ಪಾಕಿಸ್ತಾನದೊಂದಿಗೂ ಒಂದು ಪಂದ್ಯ ನಿಗದಿಯಾಗಿದೆ. ಭಾರತ ಸೆಮಿಫೈನಲ್ ಅಥವಾ ಫೈನಲ್‌ಗೆ

ಮುನ್ನಡೆದರೆ, ಈ ಪಂದ್ಯಗಳಿಗೆ ಯುಎಇ ಆತಿಥ್ಯ ವಹಿಸಲಿದೆ. ಈ ನಿರ್ಧಾರದಿಂದಾಗಿ ಉಭಯ ತಂಡಗಳ ನಡುವಿನ ಬಿಕ್ಕಟ್ಟಿಗೆ ಪರಿಹಾರ ದೊರೆತಿದ್ದು, ಫೆಬ್ರವರಿ-ಮಾರ್ಚ್‌ಗೆ ನಿಗದಿಪಡಿಸಲಾದ ಎಂಟು ತಂಡಗಳ, ೫೦-ಓವರ್‌ಗಳ ಪಂದ್ಯಾವಳಿಯ ವೇಳಾಪಟ್ಟಿಯನ್ನು ಪ್ರಕಟಿಸಲು ಐಸಿಸಿಗೆ ಅನುವು ಮಾಡಿಕೊಡುತ್ತದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧.೩೦ ಕ್ಕೆ <>*><>